## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ :** ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ ಸ್ಥಾಪನೆಗೆ ಅಗತ್ಯವಾಗಿ ಗದಗದ ಸಮೀಪದಲ್ಲಿ ಗುರುತಿಸಲಾಗಿರುವ ಒಟ್ಟು 353 ಎಕರೆ 12 ಗುಂಟೆ ಜಮೀನನ್ನು ಖರೀದಿಸಲು/ಸ್ವಾಧೀನಪಡಿಸಿಕೊಳ್ಳಲು ಅಗತ್ಯ ಅನುದಾನ ಬಿಡುಗಡೆಗೊಳಿಸುವ ಕುರಿತು.

**ಓದಲಾಗಿದೆ:**

ಸಮ ಸಂಖ್ಯೆಯ ಸರ್ಕಾರದ ಆದೇಶ, ದಿನಾಂಕ: 18-11-2015.

**ಪ್ರಸ್ತಾವನೆ:**

ಉದ್ದೇಶಿತ "ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ" ಸ್ಥಾಪನೆಗೆ ಅಗತ್ಯವಾಗಿ ಗದಗದ ಸಮೀಪದಲ್ಲಿ ಗುರುತಿಸಿರುವ ಒಟ್ಟು 353 ಎಕರೆ 12 ಗುಂಟೆ ಜಮೀನನ್ನು ಒಂದೇ ಹಂತದಲ್ಲಿ ನಿಯಮಾನುಸಾರ ಖರೀದಿಸಲು ಓದಲಾದ ಸರ್ಕಾರದ ಆದೇಶದ ಮೂಲಕ ಜಿಲ್ಲಾಧಿಕಾರಿ, ಗದಗ ಜಿಲ್ಲೆ ಇವರಿಗೆ ಅನುಮತಿಯನ್ನು ನೀಡಲಾಗಿದೆ. ಒಟ್ಟು 353 ಎಕರೆ 12 ಗುಂಟೆ ವಿಸ್ತೀರ್ಣದ ಜಮೀನನ್ನು ಖರೀದಿಸಲು ಅಗತ್ಯವಿರುವ ಒಟ್ಟು ರೂ. 29.69 ಕೋಟಿಗಳ ಮೊತ್ತವನ್ನು ಜಿಲ್ಲಾಧಿಕಾರಿ, ಗದಗ ಜಿಲ್ಲೆ ಇವರಿಗೆ ಮುಂದಿನ ದಿನಗಳಲ್ಲಿ ಬಿಡುಗಡೆಗೊಳಿಸಲು ಕ್ರಮವಹಿಸಲಾಗುವುದು ಎಂದು ಓದಲಾದ ಸರ್ಕಾರದ ಆದೇಶದಲ್ಲಿ ತಿಳಿಸಲಾಗಿತ್ತು. ಒಟ್ಟು ರೂ. 29.69 ಕೋಟಿಗಳ ಪೈಕಿ ರೂ. 6.00 ಕೋಟಿಗಳ ಮೊತ್ತವನ್ನು 2015-16ನೇ ಆರ್ಥಿಕ ಸಾಲಿನ ಪೂರಕ ಅಂದಾಜು-2ರಲ್ಲಿ ಒದಗಿಸಲು ಆರ್ಥಿಕ ಇಲಾಖೆಯು ಸಹಮತಿಸಿರುತ್ತದೆ. ಇನ್ನುಳಿದ ರೂ. 23.69 ಕೋಟಿಗಳ ಮೊತ್ತವನ್ನು ಆಡಳಿತ ಇಲಾಖೆಯಲ್ಲಿ ಲಭ್ಯವಿರುವ ಆಯವ್ಯಯದಲ್ಲಿ ಉಳಿತಾಯವನ್ನು ಗುರುತಿಸಲು ಆರ್ಥಿಕ ಇಲಾಖೆಯು ತಿಳಿಸಿರುತ್ತದೆ. ಮೊದಲ ಹಂತದಲ್ಲಿ ರೂ. 6.00 ಕೋಟಿಗಳ ಮೊತ್ತವನ್ನು ಜಿಲ್ಲಾಧಿಕಾರಿ, ಗದಗ ಜಿಲ್ಲೆ ಇವರಿಗೆ ಬಿಡುಗಡೆಗೊಳಿಸಿ ಉದ್ದೇಶಿತ "ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ" ಸ್ಥಾಪನೆಗೆ ಅಗತ್ಯವಿರುವ ಜಮೀನನ್ನು ಖರೀದಿಸುವ ಪ್ರಕ್ರಿಯೆಗಳನ್ನು ತೀವ್ರಗೊಳಿಸಲು ಸರ್ಕಾರದ ಆದೇಶವನ್ನು ಹೊರಡಿಸುವ ಅಗತ್ಯವಿರುತ್ತದೆ. ಅದಕ್ಕಾಗಿ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 44 ಜಿಪಸ 2015(ಪಿ-2), ಬೆಂಗಳೂರು, ದಿನಾಂಕ: 13-01-2016**

ಮೇಲಿನ ಪ್ರಸ್ತಾವನೆಯಲ್ಲಿನ ಎಲ್ಲಾ ಅಂಶಗಳನ್ನು ಪರಿಗಣನೆಗೆ ತೆಗೆದುಕೊಂಡು, ಉದ್ದೇಶಿತ "ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ" ಸ್ಥಾಪನೆಗೆ ಅಗತ್ಯವಾಗಿ ಗದಗದ ಸಮೀಪದಲ್ಲಿ ಗುರುತಿಸಿರುವ ಒಟ್ಟು 353 ಎಕರೆ 12 ಗುಂಟೆ ಜಮೀನನ್ನು ಒಂದೇ ಹಂತದಲ್ಲಿ ನಿಯಮಾನುಸಾರ

ಖರೀದಿಸಲು **ರೂ. 6,00,00,000-00 (ರೂಪಾಯಿ ಆರು ಕೋಟಿಗಳು ಮಾತ್ರ)ಗಳ ಮೊತ್ತವನ್ನು ಜಿಲ್ಲಾಧಿಕಾರಿ, ಗದಗ ಜಿಲ್ಲೆ ಇವರಿಗೆ ಬಿಡುಗಡೆಗೊಳಿಸಿ ಆದೇಶಿಸಲಾಗಿದೆ.**

ರೂ. 6,00,00,000-00 (ರೂಪಾಯಿ ಆರು ಕೋಟಿಗಳು ಮಾತ್ರ)ಗಳ ಮೊತ್ತವನ್ನು 2015-16ನೇ ಆರ್ಥಿಕ ಸಾಲಿನ ಪೂರಕ ಅಂದಾಜು-2ರಲ್ಲಿ **ಲೆಕ್ಕ ಶೀರ್ಷಿಕೆ: 4515-00-101-0-01-132 (ಕರ್ನಾಟಕ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾನಿಲಯ ಸ್ಥಾಪನೆ ಬಂಡವಾಳ ವೆಚ್ಚ)**ರಡಿ ವೆಚ್ಚ ಭರಿಸಲು ಮಂಜೂರಾತಿ ನೀಡಲಾಗಿದೆ.

ಬಾಕಿ ಮೊತ್ತ ರೂ. 23.69 ಕೋಟಿಗಳ (ರೂಪಾಯಿ ಇಪ್ಪತ್ಮೂರು ಕೋಟಿ ಅರವತ್ತೊಂಬತ್ತು ಲಕ್ಷಗಳು ಮಾತ್ರ) ಮೊತ್ತವನ್ನು ಮುಂದಿನ ದಿನಗಳಲ್ಲಿ ಜಿಲ್ಲಾಧಿಕಾರಿ, ಗದಗ ಜಿಲ್ಲೆ ಇವರಿಗೆ ಒದಗಿಸಲು ಕ್ರಮವಹಿಸಲಾಗುವುದು.

ರೂ. 6,00,00,000-00 (ರೂಪಾಯಿ ಆರು ಕೋಟಿಗಳು ಮಾತ್ರ)ಗಳ ಮೊತ್ತವನ್ನು ಜಿಲ್ಲಾಧಿಕಾರಿ, ಗದಗ ಜಿಲ್ಲೆ ಇವರ ಡಿ.ಡಿ.ಓ. ಕೋಡ್‌ಗೆ (ಹಣ ಸೆಳೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಯ ಕೋಡ್) ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರದ ಮೂಲಕ ಅಪ್‌ಲೋಡ್ ಮಾಡಲು ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರಿಗೆ ಅಧಿಕಾರವನ್ನು ಪ್ರದತ್ತಗೊಳಿಸಲಾಗಿದೆ.

ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಮೊತ್ತವನ್ನು ಅನ್ಯ ಉದ್ದೇಶಕ್ಕಾಗಿ ವಿನಿಯೋಗಿಸತಕ್ಕದ್ದಲ್ಲ.

ಈ ಆದೇಶವನ್ನು ಆರ್ಥಿಕ ಇಲಾಖೆಯು ತನ್ನ ಟಿಪ್ಪಣಿ ಸಂಖ್ಯೆ: ಆಇ 220 ವೆಚ್ಚ-6/2014, ದಿನಾಂಕ:13-01-2016ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

13/1

(ಎಂ.ಬಿ.ಧೋತ್ರೆ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
4. ಪ್ರಾದೇಶಿಕ ಆಯುಕ್ತರು, ಬೆಳಗಾವಿ ವಿಭಾಗ, ಬೆಳಗಾವಿ.
5. ಜಿಲ್ಲಾಧಿಕಾರಿ, ಗದಗ ಜಿಲ್ಲೆ.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಗದಗ ಜಿಲ್ಲೆ.
7. ಎಲ್ಲಾ ಆಯುಕ್ತರುಗಳು/ನಿರ್ದೇಶಕರುಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
8. ಸರ್ಕಾರದ ಜಂಟಿ ಕಾರ್ಯದರ್ಶಿ(ಆಡಳಿತ), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
9. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
10. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು.
11. ಕರ್ನಾಟಕ ವಿಕಾಸ ಮಾಸ ಪತ್ರಿಕೆಯಲ್ಲಿ ಪ್ರಕಟಿಸಲು/ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ..

ಪ್ರತಿಯನ್ನು:

1. ಮಾನ್ಯ ಮುಖ್ಯಮಂತ್ರಿಯವರ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.